ಕರ್ನಾಟಕ ಸರ್ಕಾರ
ಸಾರ್ವಜನಿಕ ಶಿಕ್ಷಣ ಇಲಾಖೆ
ಜಂಟಿ ನಿರ್ದೇಶಕರ ಕಾರ್ಯಾಲಯ, ಮಧ್ಯಾಹ್ನ ಉಪಹಾರ ಯೋಜನೆ, ಕೆ.ಜಿ.ರಸ್ತೆ, ಬೆಂಗಳೂರು-02
ದೂ.ಸಂ:22242943, ಫ್ಯಾಕ್ಸ್ :22271998,
ಇ-ಮೇಲ್: jd_mms@yahoo.co.in

ಸಂಖ್ಯೆ:ಎಂ6/ಅದಾ/ಅ.ಕೆ.ಗ್ರೈಂಡರ್12/13-14 ದಿನಾಂಕ:01-07-2013

## ಜ್ಞಾಪನಾ

**ವಿಷಯ:** ಅಕ್ಷರ ದಾಸೋಹ ಕಾರ್ಯಕ್ರಮದಡಿ ಅಡುಗೆ ತಯಾರಿಸಲು ಮಿಕ್ಸರ್/ಗ್ರೈಂಡರ್ ಖರೀದಿಸಲು ಅನುಮತಿ ನೀಡುವ ಬಗ್ಗೆ.

* * * * *

ಅಕ್ಷರ ದಾಸೋಹ ಕಾರ್ಯಕ್ರಮದಡಿ ಶಾಲೆಗಳಲ್ಲಿ ಅಡುಗೆ ಕೇಂದ್ರಗಳನ್ನು ನಿರ್ಮಿಸಿ, ಸದರಿ ಅಡುಗೆ ಕೇಂದ್ರಗಳಲ್ಲಿ ಅಡುಗೆಯವರಿಂದ ಬಿಸಿಯೂಟವನ್ನು ತಯಾರಿಸಿ ಅಡುಗೆ ಸಹಾಯಕರಿಂದ ಬಿಸಿಯೂಟವನ್ನು ಶಾಲಾ ಮಕ್ಕಳಿಗೆ ನೀಡಲಾಗುತ್ತಿದೆ. ಅಕ್ಷರ ದಾಸೋಹ ಕಾರ್ಯಕ್ರಮದ ಅನುಷ್ಠಾನದ ಕುರಿತಂತೆ ಶಾಲಾ ಭೇಟಿ ಸಂದರ್ಭಗಳಲ್ಲಿ ಶಾಲೆಗಳಲ್ಲಿ ಮಿಕ್ಸರ್/ಗ್ರೈಂಡರ್‌ಗಳಿಲ್ಲದೆ ಆಹಾರ ಪದಾರ್ಥಗಳನ್ನು ಬಂಡೆಕಲ್ಲುಗಳ ಮೇಲೆ ರುಬ್ಬಿ ಆಹಾರ ತಯಾರಿಸುತ್ತಿರುವುದನ್ನು ಗಮನಿಸಲಾಗಿದೆ.

ಹಾಗಾಗಿ ಎಲ್ಲಾ ಶಾಲೆಗಳಲ್ಲೂ ಸಹ ಮಿಕ್ಸರ್ ಗ್ರೈಂಡರ್‌ಗಳನ್ನು ಬಳಸಿ ಅಡುಗೆ ಸಿದ್ದಪಡಿಸಲು ಸಹಕಾರಿಯಾಗುವಂತೆ ಉತ್ತಮ ಐ.ಎಸ್.ಐ ಗುಣಮಟ್ಟದ ಮಿಕ್ಸರ್ ಗ್ರೈಂಡರ್ ಖರೀದಿಸಲು ಎಸ್.ಡಿ.ಎಂ.ಸಿ ಯಲ್ಲಿ ಚರ್ಚಿಸಿ ನಿರ್ಣಯಿಸಿ, ಶಾಲೆಗಳಲ್ಲಿ ಲಭ್ಯವಿರುವ ಶಾಲಾ ಅನುದಾನ, ಶಾಲೆಯಲ್ಲಿನ ಅಕ್ಷರ ದಾಸೋಹದ ಉಳಿಕೆ ಅನುದಾನ, ಚಾಲ್ತಿ/ಸಂಚಿತ ನಿಧಿಯಲ್ಲಿ ಲಭ್ಯವಿರುವ ಹಣವನ್ನು ನಿಯಮಾನುಸಾರ ಬಳಸಲು ಅನುಮತಿ ನೀಡಿದೆ. ಈ ವಸ್ತುಗಳನ್ನು ಕ್ರಮವಾಗಿ ದಾಸ್ತಾನಿಗೆ ತೆಗೆದುಕೊಂಡು ಪ್ರತಿನಿತ್ಯ ಅಕ್ಷರ ದಾಸೋಹ ಕಾರ್ಯಕ್ರಮದ ಉದ್ದೇಶಕ್ಕೆ ಬಳಸುವುದು.

**ಕರಡು ಮಾನ್ಯ ಆಯುಕ್ತರಿಂದ ಅನುಮೋದಿಸಲ್ಪಟ್ಟಿದೆ.**

**(ಎಸ್.ಜಯಕುಮಾರ್)**
**ಜಂಟಿ ನಿರ್ದೇಶಕರು,**

**ಪ್ರತಿಯನ್ನು :**

1. ರಾಜ್ಯದ ಎಲ್ಲಾ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳು, ಜಿಲ್ಲಾ ಪಂಚಾಯತ್ ರವರಿಗೆ ಮಾಹಿತಿಗಾಗಿ.
2. ರಾಜ್ಯದ ಎಲ್ಲಾ ಕಾರ್ಯನಿರ್ವಹಣಾಧಿಕಾರಿಗಳು, ತಾಲ್ಲೂಕು ಪಂಚಾಯತ್ ರವರಿಗೆ ಮಾಹಿತಿಗಾಗಿ.
3. ರಾಜ್ಯದ ಎಲ್ಲಾ ಉಪನಿರ್ದೇಶಕರು(ಆಡಳಿತ), ಸಾ.ಶಿ.ಇಲಾಖೆ ರವರಿಗೆ ಮುಂದಿನ ಕ್ರಮಕ್ಕಾಗಿ.
4. ರಾಜ್ಯದ ಎಲ್ಲಾ ಶಿಕ್ಷಣಾಧಿಕಾರಿಗಳು(ಅ.ದಾ), ಜಿಲ್ಲಾ ಪಂಚಾಯತ್ ಕಛೇರಿ, ರವರಿಗೆ ಮುಂದಿನ ಕ್ರಮಕ್ಕಾಗಿ.
5. ರಾಜ್ಯದ ಎಲ್ಲಾ ಕ್ಷೇತ್ರ ಶಿಕ್ಷಣಾಧಿಕಾರಿಗಳು, ಸಾ.ಶಿ.ಇಲಾಖೆ ರವರಿಗೆ ಮುಂದಿನ ಕ್ರಮಕ್ಕಾಗಿ.
6. ಸಹಾಯಕ ನಿರ್ದೇಶಕರು(ಅ.ದಾ) ತಾಲ್ಲೂಕು ಪಂಚಾಯತ್ ರವರಿಗೆ ಮುಂದಿನ ಕ್ರಮಕ್ಕಾಗಿ.
7. ಕಛೇರಿ ಪ್ರತಿ.